**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು,**
**ದೇವದುರ್ಗ ನ್ಯಾಯಾಲಯ, ದೇವದುರ್ಗ.**

**ಸಿ.ಸಿ ನಂ.254/2023**

ಪಿರ್ಯಾದಿದಾರರು : ಗಬ್ಬೂರು ಪೋಲಿಸ್ ಠಾಣೆ,
ಗಬ್ಬೂರು.

ವಿರುದ್ಧ

ಆರೋಪಿ: 2. ಮಯೂರಸ್ವಾಮಿ ತಂದೆ ದೊಡ್ಡಯ್ಯ ಸ್ವಾಮಿ,
ವಯಸ್ಸುಃ 36 ವರ್ಷಗಳು, ಉಃ ಒಕ್ಕಲುತನ,
ಸಾಃ ಜಗೀರ ವೆಂಕಟಪೂರ, ಹಾವಾಃ ದೇವದುರ್ಗ.

**ಭಾರತ ದಂಡ ಸಂಹಿತೆ ಕಲಂ 313 ರ ರಿತ್ಯಾ ಆರೋಪಿಗಳ ಹೇಳಿಕೆಗಳು**

ಪ್ರಶ್ನೆ-1) ನ್ಯಾಯಾಲಯದಲ್ಲಿ ಅಭಿಯೋಜನೆಯ ಪರ ನೀಡಿದ ಸಾಕ್ಷಿದಾರರ ಸಾಕ್ಷ್ಯವನ್ನು ಕೇಳಿಕೊಂಡಿದ್ದಿರಾ ?

ಉತ್ತರಃ

ಪ್ರಶ್ನೆ-2) ಫ್ರಾಸಾ-1 ಸಣ್ಣ ಈರೇಶ ತಂದೆ ಚಂದಪ್ಪ ಇವರು ತಮ್ಮ ಸಾಕ್ಷ್ಯದಲ್ಲಿ ದಿನಾಂಕ 28-03-2022 ರಂದು ಸಂಜೆ 04.00 ಗಂಟೆಗೆ ನಾನು ಠಾಣ ಪ್ರಬಾರದಲ್ಲಿ ಇದ್ದಾಗ ಯರಮರಸ ಗ್ರಾಮದ ಅಗಸೆ ಕಟ್ಟೆ ಹತ್ತಿರ ಸಾರ್ವಜನಿಕ ಸ್ಥಳದಲ್ಲಿ ಮಟಕಾ ಜೂಜಾಟ ಆಡುತ್ತಿದ್ದ ಬಾತ್ಮಿ ಬಂದಿರುತ್ತದೆ ಎಂದು ನಿಮ್ಮ ವಿರುದ್ದ ಸಾಕ್ಷ್ಯ ನುಡಿದಿದ್ದು, ಈ ಬಗ್ಗೆ ನೀವೇನಾದರೂ ಹೇಳುವುದು ಇದೆಯೇ ?

ಉತ್ತರಃ

ಪ್ರಶ್ನೆ-3) ಫ್ರಾಸಾ-1 ರವರು ತಮ್ಮ ಮುಂದುವರೆದ ಮುಖ್ಯವಿಚಾರಣೆಯಲ್ಲಿ ಬಾತ್ಮಿ ಮೇರೆಗೆ ತಕ್ಷಣ ಸಿಬ್ಬಂದಿ ಮೂಲಕ ಪಂಚರನ್ನು ಬರ ಮಾಡಿಕೊಂಡು ಸಂಜೆ 04.15 ಗಂಟೆಗೆ ಸಿಬ್ಬಂದಿ ಮತ್ತು ಪಂಚರ ಜೊತೆ ಹೊರಟು ಸ್ಥಳಕ್ಕೆ ಹೋಗಿ ವಾಹನ ನಿಲ್ಲಿಸಿ ಸ್ವಲ್ಪ ದೂರು ನಡೆದುಕೊಂಡು ಹೋಗಿ ಮರೆಯಲ್ಲಿ ನಿಂತು ನೋಡಲಾಗಿ ಒಬ್ಬ ವ್ಯಕ್ತಿ ನಸಿಬಿನ ಜೂಜಾಟ ಹಣ ಕಟ್ಟಿದ್ದಲ್ಲಿ 1 ರೂ ಗೆ 80 ರೂ ಕೊಡುವುದಾಗಿ ಹೇಳಿ ಜನರಿಂದ ಹಣ ಪಡೆದು ನಂಬರ

ಬರೆದುಕೊಳ್ಳುತ್ತಿರುವುದು ತಕ್ಷಣ ದಾಳಿ ಮಾಡಿದಾಗ ಜನರು ಓಡಿ ಹೋಗಿರುತ್ತಾನೆ ಎಂದು ನಿಮ್ಮ ವಿರುದ್ಧ ಸಾಕ್ಷ್ಯನುಡಿದಿದ್ದು, ಈ ಬಗ್ಗೆ ನೀವೇನಾದರೂ ಹೇಳುವುದು ಇದೆಯೇ ?

ಉತ್ತರಃ

ಪ್ರಶ್ನೆ-4) ಫ್ರಾಸಾ-1 ರವರು ತಮ್ಮ ಮುಂದುವರೆದ ಮುಖ್ಯವಿಚಾರಣೆಯಲ್ಲಿ ಮಟಕಾ ಜೂಜಾಟ ನಂ. ಬರೆಯುತ್ತಿದ್ದ ವ್ಯಕ್ತಿ ಸಿಕ್ಕಿದ್ದು ಆತನನ್ನು ವಿಚಾರಣೆ ಮಾಡಿದಾಗ ಆತನ ಹೆಸರು ಹರಳಪ್ಪಗೌಡ ತಂದೆ ವಿರುಪಾಕ್ಷಪ್ಪ ಎಂದು ತಿಳಿಸಿದ್ದು ಆತ ಅಂಗ ಶೋದನೆ ಮಾಡಲಾಗಿ ಆತನಿಂದ ಒಂದು ಪೆನ್ನು, ಚೀಟಿ ಮತ್ತು ಮಟಕಾ ಜೂಜಾಟದ ಹಣ ರೂ.890/- ಸಿಕ್ಕಿರುತ್ತವೆ ಎಂದು ನಿಮ್ಮ ವಿರುದ್ಧ ಸಾಕ್ಷ್ಯನುಡಿದಿದ್ದು, ಈ ಬಗ್ಗೆ ನೀವೇನಾದರೂ ಹೇಳುವುದು ಇದೆಯೇ ?

ಉತ್ತರಃ

ಪ್ರಶ್ನೆ-5) ಫ್ರಾಸಾ-1 ರವರು ತಮ್ಮ ಮುಂದುವರೆದ ಮುಖ್ಯವಿಚಾರಣೆಯಲ್ಲಿ ಜೂಜಾಟದ ಪಟ್ಟಿ ದೇವದುರ್ಗದ ಮಯೂರಸ್ವಾಮಿಗೆ ಕೊಡುವುದಾಗಿ ಹೇಳಿದ್ದು ಆತನಿಂದ ಜಪ್ತಿ ಮಾಡಿಕೊಂಡ ವಸ್ತುಗಳನ್ನು ಮತ್ತು ಆರೋಪಿ ಜೊತೆ ಠಾಣೆಗೆ ಬಂದು ಠಾಣಾಧಿಕಾರಿಗೆ ಪ್ರಕರಣ ದಾಖಲು ಮಾಡಲು ಹೇಳಿರುತ್ತೇನೆ ಎಂದು ನಿಮ್ಮ ವಿರುದ್ಧ ಸಾಕ್ಷ್ಯನುಡಿದಿದ್ದು, ಈ ಬಗ್ಗೆ ನೀವೇನಾದರೂ ಹೇಳುವುದು ಇದೆಯೇ ?

ಉತ್ತರಃ

ಪ್ರಶ್ನೆ-6) ನೀವು ಏನಾದರೂ ಹೇಳುವುದಕ್ಕೆ ಬಯಸುತ್ತೀರಾ?

ಉತ್ತರಃ

ಪ್ರಶ್ನೆ-7) ನೀರು ಸಾಕ್ಷಿ ವಿಚಾರಣೆ ಮಾಡಲು ಬಯಸುತ್ತೀರಾ?

ಉತ್ತರಃ

(ಆರೋಪಿಯ ಹೇಳಿಕೆಯನ್ನು ಸ್ವತಃ ನಾನೆ ನನ್ನ ಸಮಕ್ಷಮ ಪಡೆದಿದ್ದು, ಅವರು ನುಡಿದಿದ್ದನ್ನು ಕೇಳಿಸಿಕೊಂಡು ಅವರು ಹೇಳಿದ್ದನ್ನು ನಮೂದಿಸಿರುತ್ತೇನೆಂದು ದೃಢಿಕರಿಸಿರುತ್ತೇನೆ).

ದಿನಾಂಕಃ 20-05-2026 ಹಿರಿಯ ಸಿವಿಲ್ ನ್ಯಾಯಾಧೀಶರು

ಸ್ಥಳಃ ದೇವದುರ್ಗ. ಮತ್ತು ಜೆ.ಎಂ.ಎಫ್.ಸಿ., ದೇವದುರ್ಗ.